12

77 (61)

12

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಬಸನಗೌಡ ಬಾದರ್ಲಿ, ಎ. ವಸಂತ ಕುಮಾರ್ ಹಾಗೂ ಇತರರು ನಿಯಮ 330 ರಡಿ ನೀಡಿರುವ ಗಮನ ಸೆಳೆಯುವ ಸೂಚನೆ ಹಾಗೂ ಉತ್ತರ.**

**ಸೂಚನೆ**

"ಕೊಪ್ಪಳ ಜಿಲ್ಲೆಯಲ್ಲಿ ಈಗಾಗಲೇ ಹಲವು ಕೈಗಾರಿಕೆಗಳಿದ್ದು ಪ್ರಸ್ತುತ ರಾಜ್ಯ ಸರ್ಕಾರವು ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ BSPL ಬಾಲ್ಡೋಟಾ ಕಂಪನಿಯು 54 ಸಾವಿರ ಕೋಟಿ ರೂ ವೆಚ್ಚದಲ್ಲಿ 10.05 ದಶಲಕ್ಷ ಟನ್ ಉಕ್ಕು ಉತ್ಪಾದನಾ ಕಾರ್ಖಾನೆಯನ್ನು ನಿರ್ಮಿಸುವ ಪ್ರಸ್ತಾವನೆಗೆ ಸರ್ಕಾರವು ಅನುಮತಿ ನೀಡಿರುವುದರಿಂದ ಈ ಭಾಗದ ಜನರಿಗೆ ಕಂಟಕವಾಗಿ ಪರಿಣಮಿಸಿದೆ. ಇದರ ವಿರುದ್ಧವಾಗಿ ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ಸಾರ್ವಜನಿಕರು, ಮಠಾಧೀಶರು, ಸಂಘಸಂಸ್ಥೆಗಳು, ಪಕ್ಷಾತೀತವಾಗಿ, ಜಾತ್ಯಾತೀತವಾಗಿ ರಾಜಕೀಯ ನಾಯಕರು ಹೋರಾಟ ಮಾಡುತ್ತಿರುವವರು.

ಈ ಕಾರ್ಖಾನೆಗಳಿಂದ ಅವೈಜ್ಞಾನಿಕವಾಗಿ ಬೇರ್ಪಡಿಸದೆ ಹೊರ ಬಿಡುತ್ತಿರುವ ದೂಳು, ಹೊಗೆ ಎಷ್ಟಿರುತ್ತದೆ ಎಂದು ಅಂದಾಜಿಸಲಾಗುವುದಿಲ್ಲ. ಈ ಕಾರ್ಖಾನೆಗಳ ದೂಳು, ಹೊಗೆಯಿಂದಾಗಿ ಈ ಭಾಗದಲ್ಲಿ ತಾಪಮಾನ ಹೆಚ್ಚಾಗಿ ಮಳೆ ಪ್ರಮಾಣ ಕಡಿಮೆಯಾಗಿದೆ. ಇಲ್ಲಿರುವ ಅರಣ್ಯ ನಾಶವಾಗುತ್ತಿದೆ. ಗಿಡ, ಮರಗಳ ಬೆಳವಣಿಗೆ ಕುಂಟಿತವಾಗಿದೆ. ಅರಣ್ಯದಲ್ಲಿನ ಪ್ರಾಣಿ, ಪಕ್ಷಿ, ವನ್ಯ ಜೀವಿಗಳು ನಾಶವಾಗಿವೆ. ಕೃಷಿ ಬೆಳವಣಿಗೆ ಕುಂಠಿತಗೊಂಡಿದೆ. ಕಾರ್ಖಾನೆಯ ದೂಳಿನಿಂದ ರೈತರ ನಿರೀಕ್ಷೆಯಂತೆ ಬೆಳೆ ಸಿಗದೇ ನಷ್ಟದಲ್ಲಿದ್ದಾರೆ. ಕೆಟ್ಟ ದೂಳಿನಿಂದಾಗಿ ಜಾನುವಾರುಗಳು ಮೇಯಲು ಮೇವು ಸಿಗುತ್ತಿಲ್ಲ. ದೂಳಿನಿಂದ ಕೂಡಿದ ಹುಲ್ಲನ್ನೇ ತಿಂದು ಅನಾರೋಗ್ಯಕ್ಕೆ ಈಡಾಗುತ್ತಿವೆ. ಸುತ್ತಲೂ ಕಾರ್ಖಾನೆಯ ದೂಳು ಗ್ರಾಮಗಳಿಗೆ ಮತ್ತು ಮನೆಯೊಳಗೆ ನುಗ್ಗುತ್ತಿರುವ ಪರಿಣಾಮ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಿ ಕೆಮ್ಮು, ದಮ್ಮು, ಟಿಬಿ, ಚರ್ಮ ರೋಗ, ಕ್ಯಾನ್ಸರ್ ನಂತಹ ಕಾಯಿಲೆಗಳಿಂದ ಕೊಪ್ಪಳ ನಗರವು ಸೇರಿದಂತೆ ಸುತ್ತಲಿನ ಚಿಕ್ಕಬಗನಾಳ, ಕಾಸನಕಂಡಿ, ಹಾಲವರ್ತಿ, ಕುಣಿಕೇರಿ, ಕರಿಹಳ್ಳಿ, ಹ್ಯಾಟಿ ಇನ್ನೂ ಹಲವು ಗ್ರಾಮಗಳು ಬಳಲುತ್ತಿದ್ದಾರೆ. ಈ ರೀತಿಯಾದ ಮಾಲಿನ್ಯದಿಂದಾಗಿ ಜನರು ಇಲ್ಲಿ ಇರುವುದೇ ಬೇಡ ಎಂದು ವಲಸೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿರುವ ಬಗ್ಗೆ ನಿಯಮ 330 ರಡಿಯಲ್ಲಿ ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ".

**ಉತ್ತರ**

1. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಜಲ (ಮಾಲಿನ್ಯ ತಡೆ ಮತ್ತು ನಿಯಂತ್ರಣ) ಕಾಯ್ದೆ, 1974 ಮತ್ತು ವಾಯು (ಮಾಲಿನ್ಯ ತಡೆ ಮತ್ತು ನಿಯಂತ್ರಣ) ಕಾಯ್ದೆ, 1981 ಅಡಿಯಲ್ಲಿ ಬಲ್ಡೋಟಾ ಕಂಪನಿಗೆ ವಾರ್ಷಿಕ 3.5 ಮಿಲಿಯನ್ ಟನ್ ಸಾಮರ್ಥ್ಯದ ಇಂಟಿಗ್ರೇಟೆಡ್ ಸ್ಟೀಲ್ ಪ್ಲಾಂಟ್ ಹಾಗೂ 295 ಮೆಗಾ ವ್ಯಾಟ್ ಸಾಮರ್ಥ್ಯದ ಸ್ವಾಯತ್ತ ವಿದ್ಯುತ್ ಸ್ಥಾವರ ಸ್ಥಾಪನೆ ಮಾಡಲು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯ, ನವದೆಹಲಿ ಇವರ ದಿನಾಂಕ 27.07.2021ರ ಪರಿಸರ ಅನುಮೋದನೆಗೆ ಅನುಸಾರವಾಗಿ ಸ್ಥಾಪನ ಸಮ್ಮತಿ ಪತ್ರವನ್ನು ದಿನಾಂಕ 19.07.2024 ರಂದು ನೀಡಿರುತ್ತದೆ. ಇದರ ಯೋಜನಾ ವೆಚ್ಚವು ರೂ. 17,979 ಕೋಟಿ ಆಗಿರುತ್ತದೆ.

2. ಅಲ್ಲದೇ, ಇತ್ತೀಚೆಗೆ ಜರುಗಿದ ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶ: ಇನ್ವೆಸ್ಟ್ ಕರ್ನಾಟಕ-2025ರಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ರೂ. 54,000 ಕೋಟಿ ಬಂಡವಾಳ ಹೂಡುವ ವಿಸ್ತರಣಾ ಯೋಜನೆಗೆ BSPL (ಬಾಲ್ಡೋಟಾ) ಕಂಪನಿಯೊಂದಿಗೆ ರಾಜ್ಯ ಸರ್ಕಾರವು ಒಡಂಬಡಿಕೆ ಮಾಡಿಕೊಳ್ಳಲಾಗಿದೆ.

3. ಬಲ್ಡೋಟಾ ಗ್ರೂಪ್‌ನ ಸಂಸ್ಥೆಯಾದ ಎಂಎಸ್‌ಪಿಎಲ್ ಕೈಗಾರಿಕೆ ಒಳಗೊಂಡಂತೆ ಇತರೆ ಕೈಗಾರಿಕೆಗಳಿಂದ ಮಾಲಿನ್ಯವಾಗುತ್ತಿರುವ ಬಗ್ಗೆ ಅಧ್ಯಯನ ನಡೆಸಲು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಒಂದು ತಂಡವನ್ನು ರಚಿಸಿದ್ದು, ದಿನಾಂಕ 11.12.2024 ಮತ್ತು 13.12.2024 ರಂದು ಕೊಪ್ಪಳ ತಾಲ್ಲೂಕಿನಲ್ಲಿರುವ ವಿವಿಧ ಕೈಗಾರಿಕೆಗಳನ್ನು ಪರಿವೀಕ್ಷಣೆ ಮಾಡಿದ್ದು, ಈ ತಂಡದ ವರದಿಯನ್ನಾಧರಿಸಿ ಅನುಪಾಲನಾ ವರದಿಯನ್ನು ಸಲ್ಲಿಸುವಂತೆ ಸಂಬಂಧ ಪಟ್ಟ ಕೈಗಾರಿಕೆಗಳಿಗೆ ನೋಟೀಸ್ ಅನ್ನು ಜಾರಿ ಮಾಡಲಾಗಿರುತ್ತದೆ.

4. ಈ ತಂಡದ ಸಂಕ್ಷಿಪ್ತ ವರದಿ ಹಾಗೂ ಹಿರಿಯ ಪರಿಸರ ಅಧಿಕಾರಿಗಳು, ಕೆಎಸ್‌ಪಿಸಿಬಿ, ವಿಜಯನಗರ ಇವರು ಕೈಗಾರಿಕೆಗಳ ವಿರುದ್ಧ ಸೂಕ್ತ ಕ್ರಮ ಜರುಗಿಸುವಂತೆ ಸಲ್ಲಿಸಿರುವ ಶಿಫಾರಸ್ಸನ್ನು ಮುಂಬರುವ ರಾಜ್ಯ ಮಟ್ಟದ ಜಾರಿ ಸಮಿತಿ (SLEC) ಸಭೆಯಲ್ಲಿ ಮಂಡಿಸಲಾಗುತ್ತಿದ್ದು, ಸಮಿತಿ ಸಭೆಯ ತೀರ್ಮಾನದಂತೆ, ಜಲ ಕಾಯ್ದೆ ಮತ್ತು ವಾಯು ಕಾಯ್ದೆಯನ್ನು ಉಲ್ಲಂಘಿಸಿರುವ ಕೈಗಾರಿಕೆಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಕೆಎಸ್‌ಪಿಸಿಬಿಯು ತಿಳಿಸಿರುತ್ತದೆ.

5. ಪ್ರಸ್ತುತ, ಬಲ್ಡೋಟಾ ಕಂಪನಿ ವಿಸ್ತರಣೆಗೆ ಸ್ಥಳೀಯವಾಗಿ ವಿರೋಧ ವ್ಯಕ್ತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಈ ಬಗ್ಗೆ ಪರಿಶೀಲಿಸಲಾಗುತ್ತಿದೆ.

**ಕಡತ ಸಂಖ್ಯೆ ಸಿಐ 116 ಎಸ್‌ಪಿಐ 2025**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು

61 + 77

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀಮತಿ ಹೇಮಲತಾ ನಾಯಕ್, ಶ್ರೀ ಬಸನಗೌಡ ಬಾದರ್ಲಿ ಹಾಗೂ ಶ್ರೀ ಎ. ವಸಂತಕುಮಾರ್ ಇವರು ನಿಯಮ 330 ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ**

"ಕೊಪ್ಪಳ ತಾಲ್ಲೂಕಿನಲ್ಲಿ ಈಗಾಗಲೇ 202ಕ್ಕೂ ಹೆಚ್ಚು ಸಣ್ಣ, ಮಧ್ಯಮ ಹಾಗೂ ಬೃಹತ್ ಕಾರ್ಖಾನೆಗಳಿವೆ. ಅವುಗಳಲ್ಲಿ 20 ಐರನ್ ಅಂಡ್ ಸ್ಪಾಂಜ್ ಕಾರ್ಖಾನೆಗಳಿದ್ದು, ಸುತ್ತಲಿನ ಹತ್ತಾರು ಹಳ್ಳಿಗಳಲ್ಲಿ ಪರಿಸರ ನಾಶವಾಗಿದೆ. ಜನ-ಜಾನುವಾರುಗಳ ಆರೋಗ್ಯದ ಮೇಲೆ ತೀವ್ರ ದುಷ್ಪರಿಣಾಮ ಆಗುತ್ತಿದೆ. ಕೃಷಿಗೆ ಪೆಟ್ಟು ಬಿದ್ದಿದ್ದು, ಮೂರು ರಾಜ್ಯದ ಜೀವನಾಡಿ ತುಂಗಭದ್ರಾ ನದಿ ನೀರು ಕಲುಷಿತಗೊಳ್ಳುತ್ತಿದೆ. ಪರಿಸ್ಥಿತಿ ಹೀಗಿರುವಾಗ ಇದೀಗ ಕೊಪ್ಪಳ ನಗರಕ್ಕೆ ಹೊಂದಿಕೊಂಡೇ ಹೊಸ ಕಾರ್ಖಾನೆ ನಿರ್ಮಾಣ ಆಗುತ್ತಿರುವುದು ಜನರಲ್ಲಿ ಆತಂಕ ಮೂಡಿಸಿದೆ. ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಬಿಎಸ್ಪಿಎಲ್ ಕಂಪನಿ ಕೊಪ್ಪಳದಲ್ಲಿ 54 ಸಾವಿರ ಕೋಟಿ ರೂ. ಹೂಡಿಕೆ ಮಾಡುವುದಾಗಿ ಬಹಿರಂಗಪಡಿಸಿದೆ. 10.5 ದಶ ಲಕ್ಷ ಟನ್ ಉಕ್ಕು ಉತ್ಪಾದನೆ ಮಾಡಲಿದ್ದು, ರಾಜ್ಯದಲ್ಲಿಯೇ ಎರಡನೇ ಅತಿದೊಡ್ಡ ಕಾರ್ಖಾನೆ ಇದಾಗಿದೆ ಎಂದು ಘೋಷಿಸಿದೆ.

ಇದಕ್ಕೆ ಸರ್ಕಾರ ಅನುಮತಿಸಿರುವುದು ಆಘಾತಕಾರಿ ವಿಷಯ. ಕಾರ್ಖಾನೆ ಆರಂಭವಾಗಿದ್ದೇ ಆದಲ್ಲಿ ಕೊಪ್ಪಳ ನಗರ ಹಾಗೂ ಸುತ್ತಲಿನ ನೂರಾರು ಗ್ರಾಮಗಳ ಪರಿಸರ ಹಾಳಾಗಲಿದೆ. ಜನ-ಜಾನುವಾರು ರೋಗಗಳಿಂದ ಬಳಲಿವೆ. ಹೀಗಾಗಿ ಕೊಪ್ಪಳಕ್ಕೆ ಹೊಸ ಕಾರ್ಖಾನೆ ಬೇಡವೆಂದು ಒತ್ತಾಯಿಸುತ್ತೇನೆ. ಈ ಸಾರ್ವಜನಿಕ ಮಹತ್ವದ ಜರೂರಾದ ವಿಷಯವನ್ನು 330ನೇ ನಿಯಮದ ಮೇರೆಗೆ ಸದನದಲ್ಲಿ ತಿಳಿಸಲು ಅನುಮತಿಯನ್ನು ಕೊಡಬೇಕೆಂದು ಕೋರುತ್ತೇನೆ".

**ಉತ್ತರ**

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಜಲ (ಮಾಲಿನ್ಯ ತಡೆ ಮತ್ತು ನಿಯಂತ್ರಣ) ಕಾಯ್ದೆ, 1974 ಮತ್ತು ವಾಯು (ಮಾಲಿನ್ಯ ತಡೆ ಮತ್ತು ನಿಯಂತ್ರಣ) ಕಾಯ್ದೆ, 1981 ಅಡಿಯಲ್ಲಿ ಬಲ್ಡೋಟಾ ಕಂಪನಿಗೆ ವಾರ್ಷಿಕ 3.5 ಮಿಲಿಯನ್ ಟನ್ ಸಾಮರ್ಥ್ಯದ ಇಂಟಿಗ್ರೇಟೆಡ್ ಸ್ಟೀಲ್ ಪ್ಲಾಂಟ್ ಹಾಗೂ 295 ಮೆಗಾ ವ್ಯಾಟ್ ಸಾಮರ್ಥ್ಯದ ಸ್ವಾಯತ್ತ ವಿದ್ಯುತ್ ಸ್ಥಾವರ ಸ್ಥಾಪನೆ ಮಾಡಲು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯ, ನವದೆಹಲಿ ಇವರ ದಿನಾಂಕ 27.07.2021ರ ಪರಿಸರ ಅನುಮೋದನೆಗೆ ಅನುಸಾರವಾಗಿ ಸ್ಥಾಪನ ಸಮ್ಮತಿ ಪತ್ರವನ್ನು ದಿನಾಂಕ 19.07.2024 ರಂದು ನೀಡಿರುತ್ತದೆ. ಇದರ ಯೋಜನಾ ವೆಚ್ಚವು ರೂ. 17,979 ಕೋಟಿ ಆಗಿರುತ್ತದೆ.

ಅಲ್ಲದೇ, ಇತ್ತೀಚೆಗೆ ಜರುಗಿದ ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶ: ಇನ್ವೆಸ್ಟ್ ಕರ್ನಾಟಕ-2025ರಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ರೂ. 54,000 ಕೋಟಿ ಬಂಡವಾಳ ಹೂಡುವ ವಿಸ್ತರಣಾ ಯೋಜನೆಗೆ BSPL (ಬಾಲ್ಡೋಟಾ) ಕಂಪನಿಯೊಂದಿಗೆ ರಾಜ್ಯ ಸರ್ಕಾರವು ಒಡಂಬಡಿಕೆ ಮಾಡಿಕೊಳ್ಳಲಾಗಿದೆ.

ಬಲ್ಡೋಟಾ ಗ್ರೂಪ್‌ನ ಸಂಸ್ಥೆಯಾದ ಎಂಎಸ್‌ಪಿಎಲ್ ಕೈಗಾರಿಕೆ ಒಳಗೊಂಡಂತೆ ಇತರೆ ಕೈಗಾರಿಕೆಗಳಿಂದ ಮಾಲಿನ್ಯವಾಗುತ್ತಿರುವ ಬಗ್ಗೆ ಅಧ್ಯಯನ ನಡೆಸಲು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಒಂದು ತಂಡವನ್ನು ರಚಿಸಿದ್ದು, ದಿನಾಂಕ 10.12.2024 ಮತ್ತು 12.12.2024 ರಂದು ಕೊಪ್ಪಳ ತಾಲ್ಲೂಕಿನಲ್ಲಿರುವ ವಿವಿಧ ಕೈಗಾರಿಕೆಗಳನ್ನು ಪರಿವೀಕ್ಷಣೆ ಮಾಡಿದ್ದು, ಈ ತಂಡದ ವರದಿಯನ್ನಾಧರಿಸಿ ಅನುಪಾಲನಾ ವರದಿಯನ್ನು ಸಲ್ಲಿಸುವಂತೆ ಸಂಬಂಧ ಪಟ್ಟ ಕೈಗಾರಿಕೆಗಳಿಗೆ ನೋಟೀಸ್ ಅನ್ನು ಜಾರಿ ಮಾಡಲಾಗಿರುತ್ತದೆ.

..2.

ಬಲ್ಡೋಟಾ ಕಂಪನಿ ವಿಸ್ತರಣೆಗೆ ಸ್ಥಳೀಯವಾಗಿ ವಿರೋಧ ವ್ಯಕ್ತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಈ ಬಗ್ಗೆ ಪರಿಶೀಲಿಸಲಾಗುತ್ತಿದೆ.

**ಸಂಖ್ಯೆ ಸಿಐ 110 ಎಸ್‌ಪಿಐ 2025**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು